**Bangalore**
**Regional News**
**24.06.2026 / 2.30 p.m.**
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ದಾವಣಗೆರೆಯಲ್ಲಿ ಶಂಕಿತ ಭಯೋತ್ಪಾದಕ ಬಂಧನ : ಖಚಿತ ಪಡಿಸಿದ ಗೃಹ ಸಚಿವ ಪ್ರಿಯಾಂಕ್ ಖರ್ಗೆ

2. ಶಿವಮೊಗ್ಗದಲ್ಲಿ ಹೈಕೋರ್ಟ್ ಪೀಠ ಸ್ಥಾಪನೆ ಕುರಿತಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಗೆ, ಸಂಸದ ಬಿ.ವೈ.ರಾಘವೇಂದ್ರ ನೇತೃತ್ವದ ನಿಯೋಗ ಮನವಿ

3. ಬೆಳಗಾವಿ-ಬೆಂಗಳೂರಿನಲ್ಲಿ ಅಬಕಾರಿ ಇಲಾಖೆ ಹೆಚ್ಚುವರಿ ಆಯುಕ್ತ ವೈ.ಮಂಜುನಾಥ್ ನಿವಾಸದ ಮೇಲೆ ಇಡಿ ದಾಳಿ ; ದಾಖಲೆಗಳ ಪರಿಶೀಲನೆ

4. ರಾಜ್ಯದ ಕಾನೂನು ಸುವ್ಯವಸ್ಥೆ ಬಗ್ಗೆ ಗಮನ ಹರಿಸುವಂತೆ ಸಚಿವ ಪ್ರಿಯಾಂಕ್ ಖರ್ಗೆಗೆ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಸಲಹೆ

5. ಕೇರಳಂನಲ್ಲಿ ಮಾದಕ ವಸ್ತುಗಳ ಜಾಲ ನಿಗ್ರಹಕ್ಕೆ ಅಪರೇಷನ್ ತೂಫಾನ್ : ಸಹಕಾರ ನೀಡುವಂತೆ ರಾಜ್ಯ ಸರ್ಕಾರಕ್ಕೆ ಪತ್ರ

<><><><>

ಪಾಕಿಸ್ತಾನದೊಂದಿಗೆ ಸಂಪರ್ಕ ಹೊಂದಿರುವ ಶಂಕಿತ ಭಯೋತ್ಪಾದಕನನ್ನು ದಾವಣಗೆರೆ ಜಿಲ್ಲೆ ಪೊಲೀಸರು ಹಾಗೂ ಗುಪ್ತಚರ ಇಲಾಖೆ ಅಧಿಕಾರಿಗಳು ಬಂಧಿಸಿದ್ದಾರೆ. ಆರೋಪಿಯನ್ನು ಉತ್ತರಪ್ರದೇಶ ಮೂಲದ ಸುಹೇಲ್ ಎಂದು ಗುರುತಿಸಲಾಗಿದೆ. ಈತ ಇತ್ತೀಚೆಗೆ ಪೇಂಟಿಂಗ್ ಕೆಲಸಕ್ಕಾಗಿ ದಾವಣಗೆರೆ ಜಿಲ್ಲೆಯ ಹರಿಹರಕ್ಕೆ ಆಗಮಿಸಿದ್ದ. ಪೊಲೀಸ್ ಅಧಿಕಾರಿಗಳ ಪ್ರಕಾರ ಪ್ರಾಥಮಿಕ ತನಿಖೆಯಲ್ಲಿ ಈತ ವಾಟ್ಸ್‌ಪ್ ಖಾತೆಯಲ್ಲಿ ಶಂಕಿತ ಭಯೋತ್ಪಾದಕ ಚಟುವಟಿಕೆಗಳಿಗೆ ಸಂಬಂಧಿಸಿದ ಮಾಹಿತಿ ಹಂಚಿಕೊಂಡಿರುವುದು ತಿಳಿದುಬಂದಿದೆ. ಈ ಕುರಿತಂತೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಶಂಕಿತ ಭಯೋತ್ಪಾದಕನನ್ನು ವಶಕ್ಕೆ ಪಡೆದಿರುವುದನ್ನು ಖಚಿತಪಡಿಸಿದ್ದಾರೆ. ಆರೋಪಿ ವಿರುದ್ಧ ಹರಿಹರ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ : ಪ್ರಿಯಾಂಕ್ ಖರ್ಗೆ ( ೩೨ ಸೆಕೆಂಡ್‌ಗಳು)

<><><><>

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದಿನಿಂದ ಕುಮಾರಪಾರ್ಕ್‌ನ ಅಧಿಕೃತ ಗೃಹ ಕಚೇರಿ ಕೃಷ್ಣಾದಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಈ ನಡುವೆ ಶಿವಮೊಗ್ಗ ಸಂಸದ ಬಿ.ವೈ.ರಾಘವೇಂದ್ರ ನೇತೃತ್ವದ ಶಿವಮೊಗ್ಗ ಜನಪ್ರತಿನಿಧಿಗಳು ಹಾಗೂ ವಕೀಲರ ನಿಯೋಗವು ಮುಖ್ಯಮಂತ್ರಿಯವರನ್ನು ವಿಧಾನಸೌಧದಲ್ಲಿ ಭೇಟಿಯಾಗಿ, ಶಿವಮೊಗ್ಗದಲ್ಲಿ ಹೈಕೋರ್ಟ್ ಪೀಠ ಸ್ಥಾಪನೆ ಕುರಿತಂತೆ ಮನವಿ ಸಲ್ಲಿಸಿತು. ಮನವಿಯಲ್ಲಿ ಪೀಠ ಸ್ಥಾಪನೆಯಾಗುವವರಗೆ ಶಿವಮೊಗ್ಗ ಜಿಲ್ಲೆಯನ್ನು ಬೆಂಗಳೂರಿನ ಪ್ರಧಾನ ಪೀಠದ ವ್ಯಾಪ್ತಿಯಲ್ಲೇ ಮುಂದುವರಿಸುವಂತೆ ಕೋರಿತು. ಐತಿಹಾಸಿಕವಾಗಿ ಮತ್ತು ಪ್ರಾಯೋಗಿಕವಾಗಿ ಶಿವಮೊಗ್ಗ ಜಿಲ್ಲೆಯು ಬೆಂಗಳೂರಿನೊಂದಿಗೆ ಉತ್ತಮ ಹಾಗೂ ಸುಗಮ ಸಾರಿಗೆಯ ಜೊತೆಗೆ ಸುಲಭ ಸಂಪರ್ಕವನ್ನು ಹೊಂದಿದೆ. ಇದಕ್ಕೆ ವ್ಯತಿರಿಕ್ತವಾಗಿ ಶಿವಮೊಗ್ಗದಿಂದ ಕರಾವಳಿ ಭಾಗಕ್ಕೆ ಪ್ರಯಾಣಿಸಬೇಕಾದರೆ ಪಶ್ಚಿಮಘಟ್ಟಗಳ ಕಠಿಣ ಘಾಟಿ ರಸ್ತೆಗಳನ್ನು ದಾಟಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ಶಿವಮೊಗ್ಗದಲ್ಲೇ ಹೈಕೋರ್ಟ್ ಸರ್ಕ್ಯೂಟ್ ಪೀಠ ಸ್ಥಾಪನೆಯಾಗಬೇಕು ಹಾಗೂ ಬೆಂಗಳೂರಿನ ಪ್ರಧಾನ ಪೀಠದ ವ್ಯಾಪ್ತಿಯಲ್ಲೇ ಶಿವಮೊಗ್ಗ ಜಿಲ್ಲೆಯನ್ನು ಮುಂದುವರಿಸಬೇಕೆಂದು ಮುಖ್ಯಮಂತ್ರಿಯವರಿಗೆ ಮನವಿ ಮಾಡಿದ್ದಾರೆ. ನಿಯೋಗದಲ್ಲಿ ಶಾಸಕ ಚನ್ನಬಸಪ್ಪ, ಬೇಳೂರು ಗೋಪಾಲಕೃಷ್ಣ, ಪರಿಷತ್ ಸದಸ್ಯರಾದ ಧನ್‌ರಾಜ್ ಸರ್ಜಿ, ಅರುಣ್ ಶಂಕರ್ ಮೂರ್ತಿ ಸೇರಿದಂತೆ ವಕೀಲರು ಉಪಸ್ಥಿತರಿದ್ದರು.

<><><><>

ಅಬಕಾರಿ ಇಲಾಖೆ ಹೆಚ್ಚುವರಿ ಆಯುಕ್ತ ವೈ. ಮಂಜುನಾಥ ಅವರ ಬೆಳಗಾವಿ ನಿವಾಸದ ಮೇಲೆ ಇಂದು ಮುಂಜಾನೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ದಾಳಿ ಮಾಡಿದ್ದು, ತನಿಖೆ ಮುಂದುವರೆದಿದೆ. ಬೆಂಗಳೂರಿನ ಅವರ ಸಂಬಂಧಿಕರ ಮನೆಗಳ ಮೇಲೂ ದಾಳಿಯಾಗಿದ್ದು ಅಧಿಕಾರಿಗಳು ದಾಖಲೆಗಳನ್ನು ಪರಿಶೀಲನೆ ನಡೆಸುತ್ತಿದ್ದಾರೆ. ದಾಳಿ ವೇಳೆ ಮಹತ್ವದ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ. ವೈ ಮಂಜುನಾಥ ಅವರು ಕೆಲಸದ ನಿಮಿತ್ತ ಬೆಂಗಳೂರಿಗೆ ತೆರಳಿದ್ದು, ಅಲ್ಲಿಯ ರೇಸ್ ಕೋರ್ಸ್ ರಸ್ತೆಯ ವಸತಿ ಸಮ್ಮುಚ್ಛಯದಲ್ಲಿ ಅಧಿಕಾರಿಗಳು ವಶಕ್ಕೆ ತೆಗೆದುಕೊಂಡು ಹೆಚ್ಚಿನ ತನಿಖೆಗೆ ಒಳಪಡಿಸಿದ್ದಾರೆ. ಮಾಜಿ ಸಂಸದ ವೈ ದೇವೇಂದ್ರಪ್ಪ ಅವರ ಪುತ್ರ ಆಗಿರುವ ವೈ. ಮಂಜುನಾಥ್ ವಿದೇಶಿ ಅಕ್ರಮ ಹಣ ವರ್ಗಾವಣೆ ಆರೋಪ ಎದುರಿಸುತ್ತಿದ್ದರು. ಜೊತೆಗೆ ಇವರು ಬೆಳಗಾವಿ, ಬೆಂಗಳೂರು, ಮೈಸೂರು, ಅರಸಿಕೇರಿ, ಬಳ್ಳಾರಿ ಹಾಗೂ ಗೋವಾದಂತಹ ಪ್ರಮುಖ ಸ್ಥಳಗಳಲ್ಲಿ ಸಾಕಷ್ಟು ಆಸ್ತಿ ಹೊಂದಿರುವ ಬಗ್ಗೆ ದೂರು ದಾಖಲಾಗಿತ್ತು.

<><><><>

ರಾಜ್ಯದ ಕಾನೂನು ಸುವ್ಯವಸ್ಥೆ ಬಗ್ಗೆ ಗಮನ ಹರಿಸುವಂತೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಸಲಹೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗೃಹ ಸಚಿವರು ಸಾರ್ವಜನಿಕರನ್ನು ಹಾಗೂ ಮಾಧ್ಯಮಗಳ ಗಮನ ಸೆಳೆಯಲು ಆರ್‌ಎಸ್‌ಎಸ್ ವಿರುದ್ಧ ಟೀಕೆಗಳನ್ನು ಮಾಡುತ್ತಿದ್ದಾರೆ ಎಂದು ಅಸಮಧಾನ ವ್ಯಕ್ತಪಡಿಸಿದ್ದಾರೆ. ಆರ್‌ಎಸ್‌ಎಸ್ ವಿರುದ್ಧ ಹೇಳಿಕೆಗಳನ್ನು ನೀಡುವುದರಲ್ಲೇ ತಲ್ಲೀನರಾಗಿರುವ ಅವರು, ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿದ್ದಾರೆ.

<><><>

ಮಾದಕ ವಸ್ತುಗಳ ಜಾಲ ನಿಗ್ರಹಿಸಲು ಆಪರೇಷನ್ ತೂಫಾನ್ ಅಡಿಯಲ್ಲಿ ಸಹಕಾರ ನೀಡುವಂತೆ ಕರ್ನಾಟಕ, ತಮಿಳುನಾಡು ಮತ್ತು ಪುದುಚೇರಿ ರಾಜ್ಯಗಳಿಗೆ ಕೇರಳಂ ಮುಖ್ಯಮಂತ್ರಿ ವಿ.ಡಿ.ಸತೀಸನ್ ಪತ್ರ ಬರೆದಿದ್ದಾರೆ. ಆಪರೇಷನ್ ತೂಫಾನ್ ಕಳ್ಳ ಸಾಗಾಣೆದಾರರ ಹಣಕಾಸು ಜಾಲಗಳನ್ನು ಗುರಿಯಾಗಿಸಿಕೊಂಡು ಅಕ್ರಮವಾಗಿ ಸಂಪಾದಿಸಿದ ಆಸ್ತಿಗಳನ್ನು ವಶಪಡಿಸಿಕೊಳ್ಳಲು ಮುಂದಾಗಿದೆ. ಕೇರಳಂ ಪೊಲೀಸರು ಈಗಾಗಲೇ ಹಲವಾರು ಅಂತಾರಾಷ್ಟ್ರೀಯ ಮಾದಕವಸ್ತು ಕಳ್ಳಸಾಗಾಣೆದಾರರನ್ನು ಬಂಧಿಸಿದ್ದು, ಇನ್ನು ಹೆಚ್ಚಿನ ಕಾರ್ಯಾಚರಣೆಗೆ ಸಂಘಟಿತ ಯೋಜನೆ ಅತ್ಯಗತ್ಯ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

<><><>

ಐಸಿಎಆರ್ ಕಾರ್ಯದರ್ಶಿ ಜ್ಞಾನೇಂದ್ರ ಡಿ. ತ್ರಿಪಾಠಿ ಬೆಂಗಳೂರಿನ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆ-ಐಸಿಎಆರ್ ಗೆ ಭೇಟಿ ನೀಡಿದ್ದಾರೆ. ಈ ವೇಳೆ ತೋಟಗಾರಿಕೆ, ಸಂಶೋಧನೆ ನಾವೀನ್ಯತೆ, ತಂತ್ರಜ್ಞಾನ, ವಾಣಿಜ್ಯೀಕರಣ ಮತ್ತು ರೈತಕೇಂದ್ರಿತ ಅಭಿವೃದ್ಧಿಗೆ ಸಂಸ್ಥೆಯು ನೀಡುತ್ತಿರುವ ಅತ್ಯುತ್ತಮ ಕೊಡುಗೆಗಳನ್ನು ಶ್ಲಾಘಿಸಿದರು. ಬೆಳೆ ಸುಧಾರಣೆ, ಜೀನೋಮಿಕ್ಸ್ ನೆರವಿನ ಸಂತಾನೋತ್ಪತ್ತಿ, ಬೀಜ ಉತ್ಪಾದನೆ, ಗುಣಮಟ್ಟದ ವಸ್ತುಗಳ ಉತ್ಪಾದನೆ, ಸಸ್ಯ ರಕ್ಷಣೆ ಮತ್ತು ತಂತ್ರಜ್ಞಾನ ವರ್ಗಾವಣೆಯಲ್ಲಿ ಸಂಸ್ಥೆಗಳ ಸಾಧನೆ ಬಗ್ಗೆ ಮಾಹಿತಿ ಪಡೆದುಕೊಂಡರು. ತೋಟಗಾರಿಕೆಯಲ್ಲಿ ಉತ್ಪಾದಕತೆ, ಲಾಭದಾಯಕತೆ ಹಾಗೂ ಸುಸ್ಥಿರತೆಗೆ ಕೊಡುಗೆ ನೀಡುವ ರೈತ ಆಧಾರಿತ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸುವಲ್ಲಿ ಸಂಸ್ಥೆಯ ಪ್ರಯತ್ನಗಳನ್ನು ಅವರು ಶ್ಲಾಘಿಸಿದರು.

<><><>

ಚಾಮರಾಜನಗರ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಅಂತರಾಷ್ಟ್ರೀಯ ಮಾದಕ ವ್ಯಸನ ತಡೆ ದಿನಾಚರಣೆ ಸಂಬಂಧ ನಗರದಲ್ಲಿ ಜಾಗೃತಿ ಜಾಥಾ ನಡೆಯಿತು. ಚಾಮರಾಜೇಶ್ವರ ದೇವಾಲಯ ಆವರಣದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಶಿಧರ್ ಜಾಗೃತಿ ಜಾಥಾಗೆ ಚಾಲನೆ ನೀಡಿದರು. ಅಂತರಾಷ್ಟ್ರೀಯ ಮಾದಕ ವಸ್ತು ದುರುಪಯೋಗ ಮತ್ತು ಅಕ್ರಮ ಸಾಗಣೆ ವಿರೋಧಿ ದಿನಾಚರಣೆಯ ಅಂಗವಾಗಿ ನಾಳೆ ಮತ್ತು ನಾಳಿದ್ದು ಎರಡು ದಿನಗಳ ಕಾಲ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ವಿಶೇಷ ಮಾದಕ ವಸ್ತು ವಿರೋಧಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ತಿಳಿಸಿದ್ದಾರೆ. ಮಾದಕ ವಸ್ತುಗಳ ಸೇವನೆಗೆ ಒಮ್ಮೆ ಒಳಗಾದರೆ, ಅದರಿಂದ ಹೊರಬರುವುದು ಕಷ್ಟ ಸಾಧ್ಯ. ಈ ಹಿನ್ನೆಲೆಯಲ್ಲಿ ಉತ್ತಮ ಆರೋಗ್ಯ ಪಡೆಯುವ ಹಾಗೂ ಡ್ರಗ್ ಮುಕ್ತ ಮಂಡ್ಯ ಜಿಲ್ಲೆಯಾಗಿ ಮಾಡುವ ನಿಟ್ಟಿನಲ್ಲಿ ಶಾಲಾ ಮಕ್ಕಳಿಗೆ ಹಾಗೂ ಪೋಷಕರಿಗೆ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ.

<><><><>

ಯಾದಗಿರಿ ಜಿಲ್ಲೆಯ ರೈತರಿಗೆ ಬೆಳೆ ವಿಮೆ ಯೋಜನೆಗಳ ಪ್ರಯೋಜನವನ್ನು ಪರಿಣಾಮಕಾರಿಯಾಗಿ ತಲುಪಿಸಲು ಅಧಿಕಾರಿಗಳು ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ರಾಹುಲ್ ತುಕಾರಾಮ ಪಾಂಡ್ವೆ ಸೂಚಿಸಿದ್ದಾರೆ. ಮುಂಗಾರು ಮಳೆ ಕೊರತೆಯಿಂದ ರೈತರು ಸಂಕಷ್ಟ ಎದುರಿಸುವ ಸಾಧ್ಯತೆ ಹಿನ್ನೆಲೆಯಲ್ಲಿ, ಬೆಳೆ ವಿಮೆ ನೋಂದಣಿಯನ್ನು ತಾಲೂಕು, ಹೋಬಳಿ ಹಾಗೂ ಗ್ರಾಮ ಮಟ್ಟದಲ್ಲಿ ವ್ಯಾಪಕಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಹೆಚ್ಚಿನ ಸಂಖ್ಯೆಯ ರೈತರು ವಿಮಾ ವ್ಯಾಪ್ತಿಗೆ ಒಳಗಾಗುವಂತೆ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ತಿಳಿಸಿದ್ದಾರೆ. ಹತ್ತಿ ಬೆಳೆಯ ಉತ್ಪಾದಕತೆ ಹೆಚ್ಚಿಸುವ ನಿಟ್ಟಿನಲ್ಲಿ ಗುಣಮಟ್ಟದ ಬೀಜ ವಿತರಣೆ, ಗುಚ್ಛ ಪ್ರಾತ್ಯಕ್ಷಿಕೆ, ಉತ್ಪಾದಕತೆ ಅಭಿಯಾನ ಹಾಗೂ ಸಮಗ್ರ ಬೆಳೆ ನಿರ್ವಹಣೆ ಕುರಿತು ರೈತರಿಗೆ ಅರಿವು ಮೂಡಿಸಬೇಕೆಂದು ನಿರ್ದೇಶನ ನೀಡಿದ್ದಾರೆ.

<><><><>

ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆಯಂತೆ ಉತ್ತರಕನ್ನಡ ಜಿಲ್ಲೆಯಲ್ಲಿ ಇದೇ ೨೮ ರವರೆಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದ್ದು ಸಾರ್ವಜನಿಕರು ಎಚ್ಚರಿಕೆ ವಹಿಸುವಂತೆ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯ ಸೂಚನೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಸಾರ್ವಜನಿಕರು, ಮೀನುಗಾರರು ಹಾಗೂ ಪ್ರವಾಸಿಗರಿಗೆ ಕೆಲ ನಿಬಂಧನೆಗಳನ್ನು ಬಿಡುಗಡೆ ಮಾಡಲಾಗಿದೆ ಎಂದು ಹೇಳಿದ್ದಾರೆ. ಈ ಅವಧಿಯಲ್ಲಿ ಮೀನುಗಾರರು ಸಮುದ್ರಕ್ಕೆ ಮೀನುಗಾರಿಕೆಗೆ ತೆರಳದಂತೆ ಸೂಚಿಸಲಾಗಿದೆ. ನೀರು ಇರುವ ತಗ್ಗು ಪ್ರದೇಶ, ಕೆರೆ, ನದಿ ತೀರ,

ಸಮುದ್ರ ತೀರಕ್ಕೆ ಹೋಗದಂತೆ ಸಾರ್ವಜನಿಕರು ಮುಖ್ಯವಾಗಿ ಮಕ್ಕಳು ಜಾಗ್ರತೆವಹಿಸುವುದು. ಪ್ರವಾಸಿಗರು, ಹಾಗೂ ಸಾರ್ವಜನಿಕರು ನದಿ, ನೀರಿರುವ ಪ್ರದೇಶ ಮತ್ತು ಸಮುದ್ರಕ್ಕೆ ಇಳಿಯದಂತೆ ಕಟ್ಟೆಚ್ಚರ ವಹಿಸುವುದು. ಕೃಷಿಕರು ಮಳೆ, ಸಿಡಿಲಿನಂತಹ ಸಂದರ್ಭದಲ್ಲಿ ಕೃಷಿ ಚಟುವಟಿಕೆಯಿಂದ ದೂರವಿರುವಂತೆ ಸೂಚನೆ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>